# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 14 (ಇ) ಎಸ್‌ಆರ್‌ಎಸ್ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ:19/08/2023

## ಸುತ್ತೋಲೆ

ವಿಷಯ : ಪ್ರಭಾರ ಭತ್ಯೆ ಮಂಜೂರಾತಿ ಬಗ್ಗೆ ಸ್ಪಷ್ಟೀಕರಣ.

ಉಲ್ಲೇಖ : ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 14 (ಇ) ಎಸ್‌ಆರ್‌ಎಸ್ 2022, ದಿನಾಂಕ:23.09.2022.

****

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಮತ್ತೊಂದು ಹುದ್ದೆಯ ಸ್ವತಂತ್ರ ಪ್ರಭಾರದಲ್ಲಿ ಅಥವಾ ಹೆಚ್ಚುವರಿ ಪ್ರಭಾರದಲ್ಲಿ ಇರಿಸಿದ ಸಂದರ್ಭದಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 68 ರಲ್ಲಿ ತಿಳಿಸಿರುವಂತೆ ಪ್ರಭಾರ ಭತ್ಯೆಯನ್ನು ಮಂಜೂರು ಮಾಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಈ ಕುರಿತು ಹೊರಡಿಸಲಾಗಿರುವ ಉಲ್ಲೇಖಿತ ದಿನಾಂಕ:23.09.2022ರ ಸರ್ಕಾರಿ ಆದೇಶದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ಸ್ಪಷ್ಟೀಕರಣವನ್ನು ಕೋರುತ್ತಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಅಂಶಗಳನ್ನು ಸ್ಪಷ್ಟೀಕರಿಸಿದೆ:

(ಅ) ಪ್ರಭಾರ ಭತ್ಯೆಯು, ಪ್ರಭಾರದಲ್ಲಿರಿಸಲ್ಪಟ್ಟ ಅಧಿಕಾರಿಯು ಸೆಳೆಯುತ್ತಿರುವ ಮೂಲ ವೇತನದ ಮೇಲೆಯೇ ನಿರ್ಧರಿತವಾಗುತ್ತದೆ. ಇದು ಅದೇ ನಿಯಮಾವಳಿಯ ನಿಯಮ 32 ರಡಿಯಲ್ಲಿನ ಸ್ವತಂತ್ರ ಪ್ರಭಾರ ವ್ಯವಸ್ಥೆ ಮತ್ತು ನಿಯಮ 68 ರ ಟಿಪ್ಪಣಿ-1 ರಡಿ ಮಾಡಲಾದ ಹೆಚ್ಚುವರಿ ಪ್ರಭಾರ ವ್ಯವಸ್ಥೆಗಳ ಎರಡೂ ಸಂದರ್ಭಗಳಲ್ಲಿ ಅನ್ವಯವಾಗುತ್ತದೆ.

(ಆ) ಪ್ರಭಾರ ಭತ್ಯೆಯು ಒಂದು ತಾತ್ಕಾಲಿಕ ಭತ್ಯೆಯಾಗಿದ್ದು, ಪ್ರಭಾರವನ್ನು ಹೊಂದಿದ ಅವಧಿಗೆ ಮಾತ್ರ ಅನ್ವಯಿಸುತ್ತದೆ. ಇದು ಕರ್ನಾಟಕ ಆರ್ಥಿಕ ಸಂಹಿತೆಯ ಕಂಡಿಕೆ 99 ರಲ್ಲಿ ಉದ್ದೇಶಿತ ಸ್ಥಿರ ಭತ್ಯೆಯಾಗಿರುವುದಿಲ್ಲವಾದ್ದರಿಂದ ಈ ಭತ್ಯೆಯನ್ನು ಮಂಜೂರು ಮಾಡಲು ಮಹಾಲೇಖಪಾಲರು ಪ್ರಾಧಿಕರಿಸಬೇಕಾಗಿರುವುದಿಲ್ಲ.

(ಇ) ದಿನಾಂಕ:31.08.2022 ರವರೆಗಿನ ಪ್ರಭಾರದ ಅವಧಿಗೆ ದಿನಾಂಕ 30.04.2019 ರ ಸರ್ಕಾರಿ ಆದೇಶ ಆಇ 8 ಎಸ್‌ಆರ್‌ಎಸ್ 2018 ಹಾಗೂ ದಿನಾಂಕ 25.11.2019 ರ ಸರ್ಕಾರದ ಸುತ್ತೋಲೆ ಸಂಖ್ಯೆ ಆಇ 05 (ಇ) ಸೇನಿಸೇ 2019 ರಲ್ಲಿನ ಮಾರ್ಗಸೂಚಿ ಅನ್ವಯವಾಗುವುದಾಗಿದ್ದು, ದಿನಾಂಕ 01.09.2022 ರ ನಂತರದ ಪ್ರಭಾರದ ಅವಧಿಗೆ

ಉಲ್ಲೇಖಿತ ದಿನಾಂಕ 23.09.2022 ರ ಸರ್ಕಾರಿ ಆದೇಶದಲ್ಲಿನ ಮಾರ್ಗಸೂಚಿ-ಅನ್ವಯವಾಗುತ್ತದೆ. ಈಗಾಗಲೇ ಇತ್ಯರ್ಥಪಡಿಸಿರುವ ಪ್ರಕರಣಗಳಲ್ಲಿ ದಿನಾಂಕ 01.09.2022 ರ ನಂತರದ ಅವಧಿಯಲ್ಲಿ ಪ್ರಭಾರ ನಿರ್ವಹಿಸಿರುವ ಪ್ರಕರಣಗಳಿಗೆ ಶೇ.7.5 ರಷ್ಟು ದರದಲ್ಲಿ ಪ್ರಭಾರ ಭತ್ಯೆಯನ್ನು ಪಾವತಿಸಿರುವ ಪ್ರಕರಣಗಳಲ್ಲಿ ವ್ಯತ್ಯಾಸವನ್ನು ಪಾವತಿಸಬಹುದು.

(ಈ) ಒಂದು ವೇಳೆ ಹೆಚ್ಚುವರಿಯಾಗಿ ಪ್ರಭಾರ ಭತ್ಯೆ ಪಾವತಿಯಾಗಿದ್ದಲ್ಲಿ, ಅದನ್ನು ಹಿಂಭರಿಸಿಕೊಳ್ಳುವ ಹಕ್ಕನ್ನು ಸರ್ಕಾರವು ಕಾಯ್ದಿರಿಸಿಕೊಂಡಿರುತ್ತದೆ ಎಂಬ ಷರತ್ತನ್ನು ಪ್ರಭಾರ ಭತ್ಯೆಯನ್ನು ಮಂಜೂರು ಮಾಡುವ ಆದೇಶದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು.

(ಉ) ನಿಯಮ 68 ರಡಿಯಲ್ಲಿನ ಪ್ರಭಾರ ವ್ಯವಸ್ಥೆಯ ಸಂದರ್ಭದಲ್ಲಿ ಸಾಧ್ಯವಾದಷ್ಟು ಸಂಬಂಧಿತ ನೌಕರರು ಪ್ರಭಾರ ಭತ್ಯೆಯನ್ನು ಕ್ಲೈಮು ಮಾಡಿದ ತಿಂಗಳ ವೇತನದ ಬಿಲ್ಲಿನೊಂದಿಗೆ ಕ್ಲೈಮ್‌ನ್ನು ಇತ್ಯರ್ಥಪಡಿಸಿ ಪ್ರಭಾರ ಭತ್ಯೆಯ ಮೊತ್ತವನ್ನು ಪಾವತಿಸುವುದು.

(ಊ) ಪ್ರಭಾರ ವ್ಯವಸ್ಥೆಯನ್ನು ಮಾಡುವ ಸಕ್ಷಮ ಪ್ರಾಧಿಕಾರಿಗಳು ಹಾಗೂ ಅವರ ಅಧಿಕಾರ-ವ್ಯಾಪ್ತಿಯಲ್ಲಿ ನಿಯಮ 68 ರ ಟಿಪ್ಪಣಿ-8 ರಲ್ಲಿ ತಿಳಿಸಲಾಗಿರುವ ಯಾವುದೇ ಬದಲಾವಣೆ ಇರುವುದಿಲ್ಲ.

(ಅಜಯ್ ಎಸ್. ಕೊರಡ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

**ಪ್ರತಿ ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

3...

5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
10. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
23. ವಾರಪತ್ರ/ಶಾಖೆಯ ರಕ್ಷಾ ಕಡತ.Web portal.

ಕರ್ನಾಟಕ ಸರಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.